30ನೇ ಅಪರ ಮುಖ್ಯ ಮಹಾನಗರ ದಂಡಾಧಿಕಾರಿ, ಬೆಂಗಳೂರು.
ಬೆಂಗಳೂರು ನಗರ.

ಸಿ.ಸಿ. ನಂಃ37356/2022 ಫ್ರಾಸಾ-2 ಚಾಸಾ-10

| | |
|---|---|
| ಸಾಕ್ಷಿಯ ಹೆಸರು | ಆಶಾ |
| ತಂದೆಯ/ಗಂಡನ ಹೆಸರು | ಬಸವರಾಜೇಗೌಡ |
| ವಯಸ್ಸು | 30 ವರ್ಷ |
| ಉದ್ಯೋಗ | ಪಿ ಎಸ್ ಐ, ಜೆ ಪಿ ನಗರ ಪೋಲಿಸ್ ಠಾಣೆ |
| ವಿಳಾಸ | ಬೆಂಗಳೂರು. |

ಸಾಕ್ಷಿಯನ್ನು ಈ ದಿವಸ ದಿನಾಂಕಃ15-03-2023 ರಂದು ಕರೆಯಿಸಿ ಪ್ರಮಾಣಿಕರಿಸಲಾಯಿತು.
ಮುಖ್ಯ ವಿಚಾರಣೆಃ ಹಿರಿಯ ಸ.ಸ.ಅ. ರವರಿಂದ.

ನಾನು ದಿಃ31-07-2021 ರಿಂದ ಇಲ್ಲಿಯವರೆಗೆ ಜೆ ಪಿ ನಗರ ಪೋಲಿಸ್ ಠಾಣೆಯಲ್ಲಿ ಪಿ ಎಸ್ ಐ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ29-12-2021 ರಂದು ಮಧ್ಯಾಹ್ನ 12-00 ಗಂಟೆಯಲ್ಲಿ ಚಾಸಾ-1 ಇವರು ಅಮಾನತ್ತು ಪಡಿಸಿಕೊಂಡ ವಸ್ತುಗಳನ್ನು, ಆರೋಪಿಯನ್ನು ಹಾಗೂ ಮಹಜರ್ ಗಳನ್ನು ವರದಿಯೊಂದಿಗೆ ನನ್ನ ಮುಂದೆ ಹಾಜರುಪಡಿಸಿದರು. ಆ ವರದಿಯನ್ನು ನಿಪಿ-4 ಎಂದು ಹಾಗೂ ಅದರಲ್ಲಿರುವ ಸಾಕ್ಷಿಯ ರುಜುವನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

ನಿಪಿ-4 ರ ಪ್ರಕಾರ ವನ್ಯಜೀವಿ ಸಂರಕ್ಷಣಾ ಕಾಯಿದೆ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು, ನ್ಯಾಯಾಧೀಶರಿಗೆ ದೂರು ಸಲ್ಲಿಸಿದೆನು. ಅದನ್ನು ನಿಪಿ-5 ಎಂದು ಹಾಗೂ ಅದರಲ್ಲಿರುವ ಸಾಕ್ಷಿಯ ರುಜುವನ್ನು ನಿಪಿ-5(ಎ) ಎಂದು ಗುರುತಿಸಲಾಯಿತು.

ಅಮಾನತ್ತು ಪಡಿಸಿಕೊಂಡ ವಸ್ತುಗಳನ್ನು ಮಾಲು ಪಟ್ಟಿ ಸಂಖ್ಯೆ 126/2021 ರಲ್ಲಿ ಅಳವಡಿಸಿಕೊಂಡು ನ್ಯಾಯಾಲಯಕ್ಕೆ ನಿವೇದಿಸಿಕೊಂಡೆನು. ಆರೋಪಿಯನ್ನು ಬಂಧಿಸಿ, ವಿಚಾರಣೆ ಮಾಡಿ, ಸ್ವಇಚ್ಛಾ ಹೇಳಿಕೆಯನ್ನು ಪಡೆದುಕೊಂಡೆನು. ಆರೋಪಿತರನ್ನು ರಿಮ್ಯಾಂಡ್ ಅರ್ಜಿಯೊಂದಿಗೆ ನ್ಯಾಯಾಲಯಕ್ಕೆ ಹಾಜರುಪಡಿಸಿದೆನು.

ಸಿಬ್ಬಂದಿಗಳಾದ ಚಾಸಾ-4 ರಿಂದ ಚಾಸಾ-8 ಇವರುಗಳನ್ನು ವಿಚಾರಣೆ ಮಾಡಿ ಹೇಳಿಕೆಯನ್ನು ಪಡೆದುಕೊಂಡೆನು. ದಿಃ27-01-2022 ರಂದು ಶೋಧನಾ ವಾರೆಂಟ್ ಗಾಗಿ ನ್ಯಾಯಾಲಯಕ್ಕೆ ಮನವಿಯನ್ನು ಸಲ್ಲಿಸಿದೆನು. ಅದನ್ನು ನಿಪಿ-6 ಎಂದು ಹಾಗೂ ಅದರಲ್ಲಿರುವ

ಸಾಕ್ಷಿಯ ರುಜುವನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

ದಿಃ08-02-2022 ರಂದು ಆರೋಪಿತರ ಮನೆಗೆ ಹೋಗಿ ಶೋಧನ ಮಾಡಿದೆನು. ಅಲ್ಲಿ ಯಾವುದೇ ವಸ್ತುಗಳು ಸಿಗಲಿಲ್ಲ. ದಿಃ14-03-2022 ರಂದು ಅಮಾನತ್ತು ಪಡಿಸಿಕೊಂಡ ವಸ್ತುಗಳನ್ನು ಪರೀಕ್ಷಿಸಿ ವರದಿಯನ್ನು ನೀಡಲು ಎಸಿಎಫ್ ಇವರಿಗೆ ನಿವೇದನೆಯನ್ನು ಸಲ್ಲಿಸಿದೆನು. ಅದನ್ನು ನಿಪಿ-7 ಎಂದು ಹಾಗೂ ಅದರಲ್ಲಿರುವ ಸಾಕ್ಷಿಯ ರುಜುವನ್ನು ನಿಪಿ-7(ಎ) ಎಂದು ಗುರುತಿಸಲಾಯಿತು.

ದಿಃ18-04-2022 ರಂದು ಎಸಿಎಫ್ ಇವರಿಂದ ವರದಿಯನ್ನು ಪಡೆದೆನು. ಅದನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ-8 ಎಂದು ಗುರುತಿಸಲಾಯಿತು. ಡಿಸಿಪಿ ಇವರು ಎಸಿಪಿ ಇವರಿಗೆ ಕೊಟ್ಟ ಒಂದು ಪತ್ರವನ್ನು ನಿಪಿ-9 ಎಂದು ಗುರುತಿಸಲಾಯಿತು. ದಿಃ30-05-2022 ರಂದು ವರದಿಯನ್ನು ಸಲ್ಲಿಸಿದೆನು.

ಪಾಟಿ ಸವಾಲುಃ ಆರೋಪಿ ಪರ ವಕೀಲರು ಪಾಟೀ ಸವಾಲನ್ನು ಕಾಯ್ದಿರಿಸಿಕೊಂಡಿರುತ್ತಾರೆ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

ಓ ಹೇ ಕೇ ಸ ಇ

30ನೇ ಅ.ಮು.ಮ.ದಂ. ಬೆಂಗಳೂರು.